ಎ-330 (63)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 330ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ

## ಪ್ರಶ್ನೆ

ಬೆಂಗಳೂರು ಹಾಗೂ ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಸಹಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹದ್ದೆಗೆ ದೀರ್ಘ ಕಾಲದಿಂದ ಬಡ್ತಿ ನೀಡಿರುವುದಿಲ್ಲ. ಇದರಿಂದ ಹಲವು ಶಿಕ್ಷಕರು ಯಾವುದೇ ಪದೋನ್ನತಿ ಇಲ್ಲದೆ ನಿವೃತ್ತಿಯಾಗುತ್ತಿರುವುದರಿಂದ ಹಲವಾರು ಶಿಕ್ಷಕರು, ಅನ್ಯಾಯಕೊಳ್ಳಗಾಗಿರುವ ವಿಷಯದ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಉತ್ತರ

ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಬಾಕಿಯಿದ್ದ ಶ್ರೀ ಬಿ.ಕೆ ಪವಿತ್ರ ಪ್ರಕರಣದಿಂದಾಗಿ ಕಳೆದ ಕೆಲವು ವರ್ಷಗಳಿಂದ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ. ಅಂತಿಮ ಆದೇಶ ಬಂದಿರುವ ಹಿನ್ನೆಲೆಯಲ್ಲಿ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ.

ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ.

ಬೆಂಗಳೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:06/02/2020ರಂದು ಪ್ರಕಟಿಸಲಾಗಿರುತ್ತದೆ. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 312 ಖಾಲಿ ಇರುವ ಹುದ್ದೆಗಳಿಗೆ ಬಡ್ತಿ ನೀಡುವ ಸಂಬಂಧ ದಿನಾಂಕ:10/03/2020ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಅನುಮೋದನೆಯಾಗಿರುತ್ತದೆ. ಸದರಿ ಸಮಿತಿಯ ನಿರ್ಣಯದಂತೆ, ಶೀಘ್ರವಾಗಿ ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು.

ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂತಿಮವಾಗಿ ಆಕ್ಷೇಪಣೆಗಳು ಸ್ವೀಕೃತವಾಗಿರುವುದರಿಂದ, ಆಕ್ಷೇಪಣೆಗಳನ್ನು ಸರಿಪಡಿಸಿ, ಜ್ಯೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 410 ಖಾಲಿಯಿರುವ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು